## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಹೊಸ ಜಿಲ್ಲೆಯಾದ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಕೈಗೊಂಡಿರುವ ಅಭಿವೃದ್ಧಿ ಕಾಮಗಾರಿಗಳಿಗೆ 2015-16ನೇ ಸಾಲಿನಲ್ಲಿ ಹಣ ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ:ಯೋಇ 95 ಯೋವಿವಿ 2011, ದಿನಾಂಕ:12.03.2013.
2. ಸರ್ಕಾರದ ಆದೇಶ ಸಂಖ್ಯೆ:ಯೋಇ 95 ಯೋವಿವಿ 2011, ದಿನಾಂಕ:07.12.2013
3. ಸರ್ಕಾರದ ಆದೇಶ ಸಂಖ್ಯೆ:ಯೋಇ 95 ಯೋವಿವಿ 2011, ದಿನಾಂಕ:27.03.2015.
4. ಜಿಲ್ಲಾಧಿಕಾರಿಗಳು, ಚಿಕ್ಕಬಳ್ಳಾಪುರ ಜಿಲ್ಲೆ ಇವರ ಪತ್ರ ಸಂಖ್ಯೆ:ಎಂಪಿಎಲ್ಎಡಿ/ಸಿಆರ್/29/ 2014-15, ದಿನಾಂಕ:25.02.2016

**ಪ್ರಸ್ತಾವನೆ:**

ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಮೇಲೆ (1)ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ರೂ.824.64 ಲಕ್ಷ, ಮೇಲೆ (2)ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ರೂ.810.00 ಲಕ್ಷಗಳನ್ನು ಮತ್ತು ಮೇಲೆ (3) ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ರೂ.800.00 ಲಕ್ಷಗಳಂತೆ ಒಟ್ಟು ರೂ.2434.64 ಲಕ್ಷಗಳನ್ನು ಬಿಡುಗಡೆಗೊಳಿಸಲಾಗಿದೆ.

ಮೇಲೆ (4) ರಲ್ಲಿ ಓದಲಾದ ಪತ್ರದಲ್ಲಿ ಜಿಲ್ಲಾಧಿಕಾರಿಗಳು, ಚಿಕ್ಕಬಳ್ಳಾಪುರ ಇವರು ರೂ.2565.37 ಲಕ್ಷಗಳನ್ನು ಬಿಡುಗಡೆ ಮಾಡುವಂತೆ ಕೋರಿರುತ್ತಾರೆ. ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ:ಯೋಇ 95 ಯೋವಿವಿ 2011(ಭಾ), ಬೆಂಗಳೂರು, 5ನೇ ಮಾರ್ಚ್ 2016**

ಮೇಲ್ಕಂಡ ಅಂಶಗಳ ಹಿನ್ನಲೆಯಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಲೆಕ್ಕಶೀರ್ಷಿಕೆ 4515-00-101-1-03-132 (ಯೋಜನೆ)ಯಡಿ ರೂ.350.00 ಲಕ್ಷ (ಮೂರು ಕೋಟಿ ಐವತ್ತು ಲಕ್ಷ ರೂಪಾಯಿಗಳು ಮಾತ್ರ) ಗಳನ್ನು ಬಿಡುಗಡೆಗೊಳಿಸಲಾಗಿದೆ.

ಬಿಡುಗಡೆಯಾದ ಈ ಅನುದಾನವನ್ನು ಜಿಲ್ಲಾಧಿಕಾರಿಗಳ ವೈಯಕ್ತಿಕ ಠೇವಣಿ ಖಾತೆಯಲ್ಲಿಟ್ಟುಕೊಂಡು ಪ್ರಗತಿಯನ್ನಾಧರಿಸಿ ಕಾರ್ಯಾನುಷ್ಠಾನಾಧಿಕಾರಿಗಳಿಗೆ ಬಿಡುಗಡೆ ಮಾಡತಕ್ಕದ್ದು.

ಈ ಅನುದಾನವನ್ನು ದಿನಾಂಕ:10.02.2016 ರಂದು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಅಧ್ಯಕ್ಷತೆಯಲ್ಲಿ ಜರುಗಿದ ಸಭೆಯಲ್ಲಿ ಕೈಗೊಳ್ಳಲು ತೀರ್ಮಾನಿಸಿದ ಕಾಮಗಾರಿಗಳ ಅನುಷ್ಠಾನಕ್ಕಾಗಿ ಉಪಯೋಗಿಸಿಕೊಳ್ಳತಕ್ಕದ್ದು.

ಕಾಮಗಾರಿಗಳ ಆರ್ಥಿಕ ಮತ್ತು ಭೌತಿಕ ಪ್ರಗತಿಗಳನ್ನು ಪ್ರತಿ ಮಾಹೆ ಮತ್ತು ಹಣ ಬಳಕೆ ಪ್ರಮಾಣ ಪತ್ರವನ್ನು ನಿಯತಕಾಲಿಕವಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

.......................2

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ:ಆಇ 1 ಟಿಎಫ್‌ಪಿ 2016, ದಿನಾಂಕ:19.01.2016 ರಲ್ಲಿ ಆಡಳಿತ ಇಲಾಖೆಯ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ರಫೀ ಅಹಮದ್.ಎಂ.ಎಸ್)**
ಸರ್ಕಾರದ ಅಧೀನ ಕಾರ್ಯದರ್ಶಿ-1&2,
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಇಲಾಖೆ.

ಇವರಿಗೆ :

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಜಿಲ್ಲಾಧಿಕಾರಿಗಳು, ಚಿಕ್ಕಬಳ್ಳಾಪುರ ಜಿಲ್ಲೆ, ಚಿಕ್ಕಬಳ್ಳಾಪುರ.
3. ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಚಿಕ್ಕಬಳ್ಳಾಪುರ ಜಿಲ್ಲಾ ಪಂಚಾಯತ್, ಚಿಕ್ಕಬಳ್ಳಾಪುರ.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿ, ವಿಧಾನಸೌಧ.
5. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ(ವೆಚ್ಚ-6), ವಿಧಾನಸೌಧ.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ, ಇವರ ಆಪ್ತಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ.
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಇವರ ಆಪ್ತ ಕಾರ್ಯದರ್ಶಿ.
8. ಸರ್ಕಾರದ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ.
9. ನಿರ್ದೇಶಕರು, ಎಡಿಬಿ ವಿಭಾಗ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಇವರ ಆಪ್ತ ಸಹಾಯಕರು.
10. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ(ಕಾಂಪೆಂಡಿಯಮ್‌ಗೋಸ್ಕರ).

***